01

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 'ಮಾದಿಗ' ಮತ್ತು ಅದರ ಸಂಬಂಧಿಸಿದ ಜನಾಂಗದ ಸಮಗ್ರ ಅಭಿವೃದ್ಧಿಗಾಗಿ "ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ" ವನ್ನು ಸ್ಥಾಪಿಸುವ ಬಗ್ಗೆ.

****

ಪ್ರಸ್ತಾವನೆ:

ಸರ್ಕಾರದ ವಿವಿಧ ಯೋಜನೆಗಳ ಪ್ರಯೋಜನಗಳನ್ನು ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ ವಿವಿಧ ಜಾತಿಗಳಿಗೆ ಸಮಾನವಾಗಿ ದೊರಕಿಸಿಕೊಟ್ಟು ಸಾಮಾಜಿಕ ನ್ಯಾಯವನ್ನು ಒದಗಿಸುವ ಉದ್ದೇಶದಿಂದ ಈಗಾಗಲೇ ಬಂಜಾರ ಸಮುದಾಯಗಳಿಗೆ ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ ನಿಯಮಿತವನ್ನು ಸ್ಥಾಪಿಸಲಾಗಿದೆ. ಅದೇ ರೀತಿ ಭೋವಿ/ವಡ್ಡರ್ ಸಮುದಾಯಗಳ ಅಭಿವೃದ್ಧಿಗಾಗಿ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ನಿಯಮಿತವನ್ನು ಸ್ಥಾಪಿಸಿದೆ. ಆದುದರಿಂದ, ಪರಿಶಿಷ್ಟ ಜಾತಿಯಲ್ಲಿರುವ ಮಾದಿಗ ಮತ್ತು ಅದರ ಸಂಬಂಧಿಸಿದ ಜಾತಿಗಳಿಗೆ ಡಾ|| ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಜಾರಿಗೊಳಿಸುತ್ತಿರುವ ಎಲ್ಲಾ ಯೋಜನೆ/ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು "ಆದಿ ಜಾಂಬವ ಅಭಿವೃದ್ಧಿ ನಿಗಮ ನಿಯಮಿತ" ವನ್ನು ಸ್ಥಾಪಿಸಲು ನಿರ್ಧರಿಸಿದೆ.

ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮ ನಿಯಮಿತವು ಪ್ರತ್ಯೇಕವಾಗಿ ಪರಿಶಿಷ್ಟ ಜಾತಿಯಲ್ಲಿರುವ ಮಾದಿಗ ಮತ್ತು ಅದರ ಸಂಬಂಧಿಸಿದ ಜಾತಿಗಳ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರ ವಹಿಸುವ/ನಿಗಧಿಪಡಿಸುವ ಯೋಜನೆ/ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಸ್ಥಾಪಿಸಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಕಇ 104 ಎಸ್‌ಎಲ್‌ಪಿ 2018, ಬೆಂಗಳೂರು ದಿನಾಂಕ:16-03-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ರಾಜ್ಯದ ಮಾದಿಗ ಮತ್ತು ಅದರ ಸಂಬಂಧಿಸಿದ ಜನಾಂಗದ ಸಮಗ್ರ ಅಭಿವೃದ್ಧಿಗಾಗಿ ಕಂಪನಿ ಕಾಯ್ದೆ 2013ರನ್ವಯ ಈ ಕೆಳಕಂಡ ಷರತ್ತಿಗೊಳಪಟ್ಟು "ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ" ವನ್ನು ಸ್ಥಾಪಿಸಿ ಆದೇಶಿಸಿದೆ.

ಈ ನಿಗಮ ಡಾ||ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ, ಬೆಂಗಳೂರು ಕಟ್ಟಡದಲ್ಲಿ ನಿರ್ವಹಿಸುವುದು.

ಷರತ್ತುಗಳು:

1) ಸದರಿ ನಿಗಮವನ್ನು ಕಂಪನಿ ಕಾಯ್ದೆ 2013ರನ್ವಯ ಮೆಮೊರಾಂಡಂ ಆಫ್ ಅಸೋಷಿಯೇಷನ್ & ಆರ್ಟಿಕಲ್ಸ್ ಆಫ್ ಅಸೋಷಿಯೇಷನ್‌ಗಳನ್ನು ಸಿದ್ಧಪಡಿಸಿ ಸರ್ಕಾರದ ಅನುಮೋದನೆ ಪಡೆದು, ನಿಯಮಗಳಂತೆ ನೊಂದಣಿ ಮಾಡಿಸತಕ್ಕದ್ದು ಹಾಗೂ ಈ ಕಾಯ್ದೆಯಡಿಯಲ್ಲಿ ಬರುವ ಇತರ ಪ್ರಮಾಣ ಪತ್ರ ಇತ್ಯಾಧಿಗಳನ್ನು ಪಡೆಯತಕ್ಕದ್ದು.
2) ಸದರಿ ನಿಗಮಕ್ಕೆ ಅವಶ್ಯವಿರುವ ಸಿಬ್ಬಂದಿಯನ್ನು ನಿಯಮಾನುಸಾರ ಮಂಜೂರು ಮಾಡಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸುವುದು.
3) ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮಕ್ಕೆ ಮೇಲಿನಂತೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅಗತ್ಯವಿರುವ ಶೇ.30 ರಷ್ಟು ಸಿಬ್ಬಂದಿಗಳನ್ನು ಡಾ|| ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ನಿಯೋಜಿಸಲು ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸುವುದು.

--2